# ಕರ್ನಾಟಕ ವಿಧಾನ ಪರಿಷತ್ತು

| | | | |
|---|---|---|---|
| 1. | ಚುಕ್ಕೆ ಗುರುತಿನ ಪ್ರಶ್ನೆ | : | 890 |
| 2. | ಸದಸ್ಯರ ಹೆಸರು | : | ಶ್ರೀ ಟಿ.ಎನ್.ಜವರಾಯಿ ಗೌಡ (ವಿಧಾನಸಭೆಯಿಂದ ಚುನಾಯಿತರಾದವರು) |
| 3. | ಉತ್ತರಿಸಬೇಕಾದ ದಿನಾಂಕ | : | 17.12.2024 |
| 4. | ಉತ್ತರಿಸುವ ಸಚಿವರು | : | ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರು. |

| ಕ್ರ ಸಂ | ಪ್ರಶ್ನೆ | ಉತ್ತರ |
|---|---|---|
| (ಅ) | ರಾಜಧಾನಿ ಬೆಂಗಳೂರಿಗೆ 2ನೇ ಅಂತರಾಷ್ಟ್ರೀಯ ವಿಮಾನ ನಿಲ್ದಾಣ ನಿರ್ಮಾಣ ಮಾಡಲು ಯಾವ ಸ್ಥಳವನ್ನು ಗುರುತಿಸಲಾಗಿದೆ; ಸ್ಥಳವನ್ನು ಗುರುತಿಸಲು ಯಾವ ಯಾವ ಮಾನದಂಡಗಳನ್ನು ಅನುಸರಿಸಲಾಗುವುದು (ವಿವರ ನೀಡುವುದು) | ಮೂಲಸೌಲಭ್ಯ ಅಭಿವೃದ್ಧಿ ಇಲಾಖೆಯು ಬೆಂಗಳೂರಿಗೆ 2ನೇ ಅಂತರಾಷ್ಟ್ರೀಯ ವಿಮಾನ ನಿಲ್ದಾಣವನ್ನು ನಿರ್ಮಾಣ ಮಾಡುವ ಪ್ರಸ್ತಾವನೆಯ ಕುರಿತು ಅಧ್ಯಯನ ನಡೆಸಿ ವರದಿ ನೀಡುವ ಕಾರ್ಯವನ್ನು ಐಡೆಕ್ ಸಂಸ್ಥೆಗೆ ವಹಿಸಲಾಗಿರುತ್ತದೆ.<br><br>ಈ ಕೆಳಕಂಡ 4 ಅಂಶಗಳನ್ನು ಪರಿಗಣನೆಗೆ ತೆಗೆದುಕೊಂಡು ಸಂಭಾವ್ಯ ಸ್ಥಳಗಳ ಅಧ್ಯಯನವನ್ನು ನಡೆಸಲಾಗುತ್ತಿದೆ.<br><br>1. ತಾಂತ್ರಿಕ ಸಂಭಾವ್ಯತೆ – ವಿಮಾನ ನಿಲ್ದಾಣಕ್ಕೆ ಸಂಪರ್ಕ ಕಲ್ಪಿಸುವ ರಸ್ತೆಗಳು, ಗುಡ್ಡಗಾಡು ಪ್ರದೇಶ, ಎತ್ತರದ ರಚನೆಗಳು.<br><br>2. ಸಂಪರ್ಕ-ರಸ್ತೆ (NH & SH), ರೈಲು ಮತ್ತು ಮೆಟ್ರೋ ಸಂಪರ್ಕ.<br><br>3. ಬಳಕೆದಾರರಿಗೆ ಉದ್ದೇಶಿತ ವಿಮಾನ ನಿಲ್ದಾಣವನ್ನು ತಲುಪುವ ದೂರ ಮತ್ತು ಸಮಯ.<br><br>4. ಸ್ಥಳ ವೈಶಿಷ್ಟ್ಯತೆಗಳು – ವಿಸ್ತಾರವಾದ ಭೂಪ್ರದೇಶ, ಜಮೀನಿನ ಪ್ರಕಾರಗಳು, ಕಡಿಮೆ ಜನಸಾಂದ್ರತೆಯ ಪ್ರದೇಶ ಮತ್ತು ಜಲಸಂಪನ್ಮೂಲದ ಲಭ್ಯತೆ.<br><br>ಅದರಂತೆ, ಈ ಯೋಜನೆಗೆ ಸಂಬಂಧಿಸಿದಂತೆ ಯೋಜನಾ ವರದಿ / ಪ್ರಸ್ತಾವನೆಯನ್ನು ಸಿದ್ಧಪಡಿಸುವ ಕಾರ್ಯ ಪರಿಶೀಲನೆಯಲ್ಲಿರುತ್ತದೆ. |
| (ಆ) | ಈ ವಿಮಾನ ನಿಲ್ದಾಣ ನಿರ್ಮಿಸಲು ಎಷ್ಟು ಎಕರೆ ಜಮೀನನ್ನು ಭೂಸ್ವಾಧೀನಪಡಿಸಿಕೊಳ್ಳಲಾಗುವುದು. ಇದರಲ್ಲಿ ಸರ್ಕಾರಿ ಮತ್ತು ಖಾಸಗಿ ಜಮೀನು ಎಷ್ಟು; (ವಿವರ ನೀಡುವುದು) | |
| (ಇ) | ಈ ಅಂತರಾಷ್ಟ್ರೀಯ ವಿಮಾನ ನಿಲ್ದಾಣ ನಿರ್ಮಿಸುವ ಸಲುವಾಗಿ ಕೇಂದ್ರ ಸರ್ಕಾರದ ಭಾರತೀಯ ವಿಮಾನ ನಿಲ್ದಾಣಗಳ ಪ್ರಾಧಿಕಾರಕ್ಕೆ ಪ್ರಸ್ತಾವನೆಯನ್ನು ಕಳುಹಿಸಿಕೊಡಲಾಗಿದೆಯೇ; ಇಲ್ಲದಿದ್ದಲ್ಲಿ ಈ ಪ್ರಕ್ರಿಯೆ ಯಾವ ಹಂತದಲ್ಲಿದೆ? (ಸಂಪೂರ್ಣ ವಿವರದೊಂದಿಗೆ ಮಾಹಿತಿ ಒದಗಿಸುವುದು) | |

ಸಂಖ್ಯೆ: ಮೂಅಇ 215 ರಾಅವಿ 2024

(ಎಂ.ಬಿ. ಪಾಟೀಲ)
ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ
ಮೂಲಸೌಲಭ್ಯ ಅಭಿವೃದ್ಧಿ, ಸಚಿವರು